**ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,**

**ಹಾಗು ವಿಶೇಷ ನ್ಯಾಯಾಲಯ. ಹಾವೇರಿ**

**ಪ್ರಕರಣ ಸಂಖ್ಯೆ: ಸ್ಪೆಷಲ್ ಎಸ್.ಸಿ/ಎಸ್.ಟಿ.16/2025**

**ಪಿರ್ಯಾದಿ:** ಕುಮಾರಪಟ್ಟಣಂ ಪೊಲೀಸ್ ಠಾಣೆ

**–ವಿರುದ್ಧ–**

**ಆರೋಪಿತರು:**

1. ಪುನೀತ ಶಿವ್ವೇಸ್ವಾಮಿ ಶಿಗ್ಲಿ
   ವಯಸ್ಸು: 27 ವರ್ಷ,
2. ವಿಜಯಕುಮಾರ ಜಿ.ವಿ. ವಜ್ರಪ್ಪ ಗಿರಣಿಮಣಿ
   ವಯಸ್ಸು: 36 ವರ್ಷ,
3. ಓಂಪ್ರಕಾಶ ಚಂದ್ರಶೇಖರ ಮೂರ್ತಿ
   ವಯಸ್ಸು: 49 ವರ್ಷ,
4. ಚಿಕ್ಕಣ್ಣ ಚಂದ್ರಶೇಖರ ಶಿಗ್ಲಿ
   ವಯಸ್ಸು: 47 ವರ್ಷ,
5. ಲಕ್ಷ್ಮೀ @ಗೌರಮ್ಮ ಕೋಂ ಚಿಕ್ಕಣ್ಣ ಶಿಗ್ಲಿ
   ವಯಸ್ಸು: 29 ವರ್ಷ,
   ಸಾ:ಕೋಡಿಯಾಲಹೊಸಪೇಟೆ ತಾ:ರಾಣೇಬೆನ್ನೂರು
6. ನಾಗಮ್ಮ ಕೋಂ ಪಾಲಾಕ್ಷಪ್ಪ ಅಂಬಿಗೇರ
   ವಯಸ್ಸು: 43 ವರ್ಷ,
   ಸಾ: ನೆಲವಾಗಲ ತಾ: ರಾಣೇಬೆನ್ನೂರು
7. ನವನೀತ ಎಂ. ಜಿ.ಮೂರ್ತಿ
   ವಯಸ್ಸು: 56 ವರ್ಷ,
   ಸಾ: ಕುಮಾರಪಟ್ಟಣಂ, ತಾ: ರಾಣೇಬೆನ್ನೂರು

# ದೋಷಾರೋಪಣೆ

ಶ್ರೀ ಎನ್.ಎಂ. ರಮೇಶ, ಬಿ.ಕಾಂ. ಎಲ್.ಎಲ್.ಬಿ., ಎಲ್.ಎಲ್.ಎಂ. ಹಾವೇರಿಯ ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಎಂಬ ನಾನು ಆರೋಪಿತರಾದ ನಿಮ್ಮ ಮೇಲೆ ಈ ಕೆಳಕಂಡಂತೆ ಹೊರಿಸುವ ದೋಷಾರೋಪಣೆಗಳೇನೆಂದರೆ,

1. ಚಾಸಾ-1-ಐಶ್ವರ್ಯ ಇವರ ಅಕ್ಕ ಚಾಸಾ-4-ಅಕ್ಷತಾ ಇವರು 1ನೇ ಆರೋಪಿಯಾದ ನಿಮ್ಮನ್ನು ಪ್ರೀತಿಸಿ 08 ತಿಂಗಳ ಹಿಂದೆ ಹಿರೇಕೆರೂರು ವಿವಾಹ ನೋಂದಣಾಧಿಕಾರಿಗಳ ಮುಂದೆ ಮದುವೆಯಾಗಿ ನಂತರ ಅವಳಿಗೆ ಗಂಡ ಬೇಡ ಅಂತಾ ಡೈವರ್ಸ್ ಕೇಳಲು ಹೋಗಿದ್ದು, ಅದಕ್ಕೆ 1ನೇ ಆರೋಪಿಯಾದ ನೀವು ಕೊಡುವುದಿಲ್ಲ ಅಂತಾ ತಿಳಿಸಿದ್ದಕ್ಕೆ ನಿಮ್ಮಿಬ್ಬರ ನಡುವೆ ವೈ ಮನಸ್ಸು ಉಂಟಾಗಿದ್ದು ಅದೇ ಕಾರಣಕ್ಕಾಗಿ ದಿನಾಂಕಃ18.02.2025 ರಂದು ರಾತ್ರಿ 9.00 ಗಂಟೆ ಸಮಯದಲ್ಲಿ ಚಾಸಾ-1 ಮತ್ತು 4 ರವರು ಮನೆಯಲ್ಲಿದ್ದಾಗ ಆರೋಪಿತರಾದ ನೀವೆಲ್ಲರೂ ಅಪರಾಧ ಎಸಗುವ ಏಕೊದ್ದೇಶವನ್ನು ಹೊಂದಿ ಅಕ್ರಮ ಗುಂಪು ಕಟ್ಟಿಕೊಂಡು ಬಂದು, ಭಾರತೀಯ ನ್ಯಾಯ ಸಂಹಿತೆ-2023 ಕಲಂ 189(2) ಸಹವಾಚಕ 190ರ ಅಡಿಯಲ್ಲಿ ಶಿಕ್ಷಾರ್ಹವಾಗುವ ಅಪರಾಧ ಎಸಗಿರುತ್ತೀರಿ ಎಂದು ಈ ನ್ಯಾಯಾಲಯದ ಸಂಜ್ಞಾನಕ್ಕೆ ಬಂದಿರುತ್ತದೆ.

2. ಎರಡನೇಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವು ಅಪರಾಧ ಎಸಗುವ ಏಕೊದ್ದೇಶದಿಂದ ಅಕ್ರಮ ಗುಂಪು ಕಟ್ಟಿಕೊಂಡು ಬಂದು ಚಾಸಾ-1 ರವರ ಮನೆ ಮುಂದೆ ದೊಂಬಿಯನ್ನುಂಟು ಮಾಡಿದ್ದು, ಆ ಮೂಲಕ ಆರೋಪಿತರಾದ ನೀವೆಲ್ಲರೂ ಭಾರತೀಯ ನ್ಯಾಯ ಸಂಹಿತೆ -2023 ಕಲಂ 191(2) ಸಹವಾಚಕ 190ರ ಅಡಿಯಲ್ಲಿ ಶಿಕ್ಷಾರ್ಹವಾಗುವ ಅಪರಾಧ ಎಸಗಿರುತ್ತೀರಿ ಎಂದು ಈ ನ್ಯಾಯಾಲಯದ ಸಂಜ್ಞಾನಕ್ಕೆ ಬಂದಿರುತ್ತದೆ.

3. ಮೂರನೇಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವು ಅಪರಾಧ ಎಸಗುವ ಏಕೊದ್ದೇಶದಿಂದ ಅಕ್ರಮ ಗುಂಪು ಕಟ್ಟಿಕೊಂಡು ಬಂದು ಚಾಸಾ-1 ರವರನ್ನು ಮನೆಯಿಂದ ಹೊರಗೆ ಎಳೆದುಕೊಂಡು ಬಂದು 1ನೇ ಆರೋಪಿಯಾದ ನೀವು ಕೈಯಿಂದ ಹೊಡೆದು ಗಾಯಪಡಿಸಿದ್ದು, ಆ ಮೂಲಕ ಆರೋಪಿತರಾದ ನೀವು ಭಾರತೀಯ ನ್ಯಾಯ ಸಂಹಿತೆ-2023 ಕಲಂ 115(2) ಸಹವಾಚಕ 190ರ ಅಡಿಯಲ್ಲಿ ಶಿಕ್ಷಾರ್ಹವಾಗುವ ಅಪರಾಧ ಎಸಗಿರುತ್ತೀರಿ ಎಂದು ಈ ನ್ಯಾಯಾಲಯದ ಸಂಜ್ಞಾನಕ್ಕೆ ಬಂದಿರುತ್ತದೆ.

4. ನಾಲ್ಕನೇಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವು ಅಪರಾಧ ಎಸಗುವ ಏಕೊದ್ದೇಶದಿಂದ ಅಕ್ರಮ ಗುಂಪು ಕಟ್ಟಿಕೊಂಡು ಬಂದು ಚಾಸಾ-4 ರವರನ್ನು ಮನೆಯಿಂದ ಹೊರಗೆ ಎಳೆದುಕೊಂಡು ಬಂದು 5ನೇ ಆರೋಪಿಯಾದ ನೀವು ಇಟ್ಟಿಗೆಯಿಂದ ಆಕೆಯ ಮೂಗಿಗೆ ಹೊಡೆದು ಗಾಯಪಡಿಸಿದ್ದು, ಆ ಮೂಲಕ ಆರೋಪಿತರಾದ ನೀವು ಭಾರತೀಯ ನ್ಯಾಯ ಸಂಹಿತೆ -2023 ಕಲಂ 118(1) ಸಹವಾಚಕ 190ರ ಅಡಿಯಲ್ಲಿ ಶಿಕ್ಷಾರ್ಹವಾಗುವ ಅಪರಾಧ ಎಸಗಿರುತ್ತೀರಿ ಎಂದು ಈ ನ್ಯಾಯಾಲಯದ ಸಂಜ್ಞಾನಕ್ಕೆ ಬಂದಿರುತ್ತದೆ.

5. ಐದನೇಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವು ಅಪರಾಧ ಎಸಗುವ ಏಕೊದ್ದೇಶದಿಂದ ಅಕ್ರಮ ಗುಂಪು ಕಟ್ಟಿಕೊಂಡು ಬಂದು ಚಾಸಾ-1 ಮತ್ತು 4 ರವರ ಮನೆಯೊಳಗೆ ಅತಿಕ್ರಮ ಪ್ರವೇಶ ಮಾಡಿದ್ದು, ಆ ಮೂಲಕ ಆರೋಪಿತರಾದ ನೀವು ಭಾರತೀಯ ನ್ಯಾಯ ಸಂಹಿತೆ -2023 ಕಲಂ 329(4) ಸಹವಾಚಕ 190ರ ಅಡಿಯಲ್ಲಿ ಶಿಕ್ಷಾರ್ಹವಾಗುವ ಅಪರಾಧ ಎಸಗಿರುತ್ತೀರಿ ಎಂದು ಈ ನ್ಯಾಯಾಲಯದ ಸಂಜ್ಞಾನಕ್ಕೆ ಬಂದಿರುತ್ತದೆ.

6. ಆರನೇಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವು ಅಪರಾಧ ಎಸಗುವ ಏಕೊದ್ದೇಶದಿಂದ ಅಕ್ರಮ ಗುಂಪು ಕಟ್ಟಿಕೊಂಡು ಬಂದು ಚಾಸಾ-1 ಮತ್ತು 4 ರವರನ್ನು ಮನೆಯಿಂದ ಹೊರಗೆ ಎಳೆದುಕೊಂಡು ಬಂದು ಹೊಡೆದು ಅವರ ಗೌರವಕ್ಕೆ ಧಕ್ಕೆಯನ್ನುಂಟುಮಾಡಿ ಅವಮಾನಗೊಳಿಸಿದ್ದು, ಆ ಮೂಲಕ ಆರೋಪಿತರಾದ ನೀವು ಭಾರತೀಯ ನ್ಯಾಯ ಸಂಹಿತೆ-2023 ಕಲಂ 74 ಸಹವಾಚಕ 190 ರ ಅಡಿಯಲ್ಲಿ ಶಿಕ್ಷಾರ್ಹವಾಗುವ ಅಪರಾಧ ಎಸಗಿರುತ್ತೀರಿ ಎಂದು ಈ ನ್ಯಾಯಾಲಯದ ಸಂಜ್ಞಾನಕ್ಕೆ ಬಂದಿರುತ್ತದೆ.

7. ಏಳನೇಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವು ಅಪರಾಧ ಎಸಗುವ ಏಕೊದ್ದೇಶದಿಂದ ಅಕ್ರಮ ಗುಂಪು ಕಟ್ಟಿಕೊಂಡು ಬಂದು ಚಾಸಾ-1 ಮತ್ತು 4 ರವರಿಗೆ ಮಿಂಡ್ರಿಗಾಳಿ ಅಂತಾ ಅವಾಚ್ಯ ಶಬ್ದಗಳಿಂದ ಬೈದಾಡಿದ್ದು, ಆ ಮೂಲಕ ಆರೋಪಿತರಾದ ನೀವು ಭಾರತೀಯ ನ್ಯಾಯ ಸಂಹಿತೆ-2023 ಕಲಂ 352 ಸಹವಾಚಕ 190 ರ ಅಡಿಯಲ್ಲಿ ಶಿಕ್ಷಾರ್ಹವಾಗುವ ಅಪರಾಧ ಎಸಗಿರುತ್ತೀರಿ ಎಂದು ಈ ನ್ಯಾಯಾಲಯದ ಸಂಜ್ಞಾನಕ್ಕೆ ಬಂದಿರುತ್ತದೆ.

8. ಎಂಟನೇಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವು ಅಪರಾಧ ಎಸಗುವ ಏಕೊದ್ದೇಶದಿಂದ ಅಕ್ರಮ ಗುಂಪು ಕಟ್ಟಿಕೊಂಡು ಬಂದು ಚಾಸಾ-1 ರವರನ್ನು ಮನೆಯಿಂದ ಹೊರಗೆ ಎಳೆದುಕೊಂಡು ಬಂದು ಅವಾಚ್ಯ ಶಬ್ದಗಳಿಂದ ಬೈದಾಡಿ, ಕೈಯಿಂದ ಹೊಡೆದು ಜೀವದ ಬೆದರಿಕೆ ಹಾಕಿದ್ದು, ಆ ಮೂಲಕ ಆರೋಪಿತರಾದ ನೀವು ಭಾರತೀಯ ನ್ಯಾಯ ಸಂಹಿತೆ -2023 ಕಲಂ 351(2) ಸಹವಾಚಕ 190 ರ ಅಡಿಯಲ್ಲಿ ಶಿಕ್ಷಾರ್ಹವಾಗುವ ಅಪರಾಧ ಎಸಗಿರುತ್ತೀರಿ ಎಂದು ಈ ನ್ಯಾಯಾಲಯದ ಸಂಜ್ಞಾನಕ್ಕೆ ಬಂದಿರುತ್ತದೆ.

9. ಒಂಭತ್ತನೇಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವು ಹಿಂದೂ ಬೆಸ್ತರ ಜಾತಿಗೆಗೆ ಸೇರಿದ್ದು, ಚಾಸಾ-1 ಮತ್ತು 4 ರವರು ಹಿಂದೂ ನಾಯಕ (ಎಸ್.ಟಿ) ಜಾತಿಗೆ ಸೇರಿದವರು ಎಂದು ಗೊತ್ತಿದ್ದರೂ ಸಹ ಅವರಿಗೆ ಸಾರ್ವಜನಿಕ ಸ್ಥಳದಲ್ಲಿ ತಳವಾರ ಮಿಂಡ್ರಿ ಮಕ್ಕಳು ಅಂತಾ ಜಾತಿ  ಹಿಡಿದು ಬೈದು ಜಾತಿ ನಿಂದನೆ ಮಾಡಿ ಅವಮಾನಗೊಳಿಸಿದ್ದು, ಆ ಮೂಲಕ ಆರೋಪಿತರಾದ ನೀವು ಎಸ್.ಸಿ/ಎಸ್.ಟಿ (POA) ಕಲಂ.3(1)(r) ರಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿರುತ್ತೀರಿ.

10. ಹತ್ತನೇಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರಾದ ನೀವು ಹಿಂದೂ ಬೆಸ್ತರ ಜಾತಿಗೆಗೆ ಸೇರಿದ್ದು, ಚಾಸಾ-1 ಮತ್ತು 4 ರವರು ಹಿಂದೂ ನಾಯಕ (ಎಸ್.ಟಿ) ಜಾತಿಗೆ ಸೇರಿದವರು ಎಂದು ಗೊತ್ತಿದ್ದರೂ ಸಹ ಅವರಿಗೆ ಸಾರ್ವಜನಿಕ ಸ್ಥಳದಲ್ಲಿ ತಳವಾರ ಮಿಂಡ್ರಿ ಮಕ್ಕಳು ಅಂತಾ ಜಾತಿ ಹಿಡಿದು ಬೈದಾಡಿ ಅವಮಾನಗೊಳಿಸಿದ್ದಲ್ಲದೇ ಅವರಿಗೆ ಕೈಗಳಿಂದ ಮತ್ತು ಇಟ್ಟಿಗೆಯಿಂದ ಹೊಡಿ-ಬಡಿ ಮಾಡಿ ಗಾಯಗೊಳಿಸಿ, ಪ್ರಾಣ ಬೆದರಿಕೆ ಹಾಕಿದ್ದು, ಆ ಮೂಲಕ ಆರೋಪಿತರಾದ ನೀವು ಎಸ್.ಸಿ/ಎಸ್.ಟಿ (POA) ಕಲಂ.3(2)(va) ರಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿರುತ್ತೀರಿ.

ಮೇಲೆ ಹೇಳಿದ ಆರೋಪಣೆಗಳಿಗಾಗಿ ಹಾವೇರಿ ವಿಶೇಷ ನ್ಯಾಯಾಧೀಶರ ನ್ಯಾಯಾಲಯದಲ್ಲಿ ನಿಮ್ಮ ಮೇಲೆ ಮೊಕದ್ದಮೆ ನಡೆಯತಕ್ಕದ್ದು ಅಂತಾ ಆದೇಶಿಸಿದ್ದೇನೆ.

ದಿನಾಂಕಃ14.07.2025
ಹಾವೇರಿ.

ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ
ನ್ಯಾಯಾಧೀಶರು ಮತ್ತು ವಿಶೇಷ ನ್ಯಾಯಾಧೀಶರು